## ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹಗರಿಬೊಮ್ಮನಹಳ್ಳಿ

ಸಿ ಸಿ ನಂ. 450/2024

ಸಾಕ್ಷಿಗೆ ದಿನಾಂಕ 24-10-2025 ರಂದು ಪ್ರಮಾಣ ವಚನ ಭೋದಿಸಲಾಯಿತು.

C.W.: 3 P.W.: 2

| | | |
|---|---|---|
| ಹೆಸರು | ಃ | ವೀರಣ್ಣ |
| ತಂದೆಯ ಹೆಸರು | ಃ | ಜಗದೀಶಪ್ಪ |
| ವಯಸ್ಸು | ಃ | 51 ವರ್ಷ |
| ಉದ್ಯೋಗ | ಃ | ಆಟೋ ಚಾಲಕ |
| ವಾಸ ಸ್ಥಳ | ಃ | ಹೊಸಕೆರೆ ಗ್ರಾಮ |

ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ನನಗೆ ಆರೋಪಿ ಪರಿಚಯ ಇದೆ ಅವನು ನನ್ನ ಗ್ರಾಮದವನು. ಅವನ ಮೇಲೆ ಏನು ಪ್ರಕರಣ ದಾಖಲಾಗಿದೆ ಅವನು ಯಾವ ಕಾರಣಕ್ಕೆ ನ್ಯಾಯಾಲಯಕ್ಕೆ ಬಂದಿದ್ದಾನೆಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಯಾವುದೇ ಪಂಚನಾಮೆ ಜರುಗಿಸಿಲ್ಲ ಮತ್ತು ಯಾವುದೇ ಮು ಮಾಲುಗಳನ್ನು ಅಮಾನತ್ತುಪಡಿಸಿಕೊಂಡಿಲ್ಲ. ಸಾಕ್ಷಿಗೆ ನಿಪಿ-1 ದಾಖಲೆ ತೋರಿಸಲಾಗಿ ಅದು ಘಟನಾ ಸ್ಥಳದ ಪಂಚನಾಮೆಯಾಗಿದ್ದು ಸಾಕ್ಷಿಯು ತನ್ನ ಸಹಿ ಇದೆ ಅಂತಾ ನೋಡಿ ಗುರುತಿಸಿದ್ದು ಅದನ್ನು ನಿಪಿ-1ಎ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಕೂಡ್ಲಿಗಿ ಪೋಲೀಸ್ ಠಾಣೆಯಲ್ಲಿ ಪೋಲೀಸರ ಕೋರಿಕೆ ಮೇರೆಗೆ ಈಗ ಸುಮಾರು 5 ತಿಂಗಳ ಹಿಂದೆ ಮಾಡಿದ್ದೇನೆ. ಸದರಿ ದಾಖಲೆಯಲ್ಲಿ ಏನು ಬರೆದಿರುತ್ತಾರೆಂದು ನನಗೆ ಗೊತ್ತಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-

ದಿಃ 06-03-2024 ರಂದು ಪೋಲೀಸರು ಸಂಜೆ 5.35 ರಿಂದ 6.15 ಗಂಟೆಯವರೆಗೆ ಹೊಸಕೆರೆ ಗ್ರಾಮದ ಸರ್ಕಾರಿ ಹಿ ಪ್ರಾ ಶಾಲೆ ಹತ್ತಿರ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ನಿಪಿ-1 ರಂತೆ ಪಂಚನಾಮೆ ಜರುಗಿಸಿ ಆರೋಪಿತನನ್ನು ಬಂಧಿಸಿ ಆತನಿಂದ ಒಂದು ಮಟ್ಕಾ ಪಟ್ಟಿ, ಒಂದು ಬಾಲ್ ಪೆನ್ ಮತ್ತು ನಗದು ಹಣ ರೂ.1050/- ಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಘಟನಾ ಸ್ಥಳದಲ್ಲಿ ನಾನು ನಿಪಿ-1 ರಲ್ಲಿರುವ

ವಿಚಾರ ತಿಳಿದುಕೊಂಡು ಸದರಿ ದಾಖಲೆಗೆ ನಾನು ಸಹಿ ಮಾಡಿರುತ್ತೇನೆಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹಾ ಆರೋಪಿಗೆ ಸಹಾಯ ಮಾಡಲೆಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ- ಇಲ್ಲ

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ